ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014–15 ದಿನಾಂಕ: 7–10–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ವಿಶ್ವ ದೃಷ್ಟಿ ದಿನಾಚರಣೆ: ಕಾಲ್ನಡಿಗೆ ಜಾಥಾ:<br><br>ಮುಖ್ಯ ಅತಿಥಿ:<br><br>ಯು. ಟಿ. ಖಾದರ್,<br><br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. | 08–10–2015<br><br>ಗುರುವಾರ<br><br>ಬೆಳಿಗ್ಗೆ<br><br>7–30 ಗಂಟೆಗೆ | ಬೆಂಗಳೂರು ಪ್ರೆಸ್ ಕ್ಲಬ್, ಕಬ್ಬನ್ ಉದ್ಯಾನವನ ಆವರಣ,<br><br>ಬೆಂಗಳೂರು |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

## ವನ್ಯ ಸಂಪತ್ತನ್ನು ಮುಂದಿನ ಪೀಳಿಗೆಗೆ ಸಂರಕ್ಷಿಸುವುದು ನಮ್ಮೆಲ್ಲರ ಕರ್ತವ್ಯ– ರಾಜ್ಯಪಾಲ ವಾಜುಭಾಯಿ ವಾಲಾ

ಬೆಂಗಳೂರು, ಅಕ್ಟೋಬರ್ 7 (ಕರ್ನಾಟಕ ವಾರ್ತೆ)

ಸಮೃದ್ಧವಾದ ಮತ್ತು ಸಂಪದ್ಭರಿತವಾದ ವನ್ಯ ಸಂಪತ್ತುಗಳನ್ನೊಳಗೊಂಡ ಅರಣ್ಯ ಸಂಪತ್ತನ್ನು ಮುಂದಿನ ಪೀಳಿಗೆಗೆ ಉತ್ತಮ ಸ್ಥಿತಿಯಲ್ಲಿ ನೀಡುವುದು ಪ್ರತಿಯೊಬ್ಬ ಪ್ರಜೆಯ ಜವಾಬ್ದಾರಿ ಹಾಗೂ ಅತ್ಯಮೂಲ್ಯ ಕರ್ತವ್ಯ ಎಂದು ರಾಜ್ಯಪಾಲರಾದ ವಜುಭಾಯಿ ರೂಢಭಾಯಿ ವಾಲಾ ಅವರು ಕರೆ ನೀಡಿದರು.

ಅರಣ್ಯ ಇಲಾಖೆ ವತಿಯಿಂದ ಇಂದು ಭಾರತೀಯ ವಿಜ್ಞಾನ ಸಂಸ್ಥೆಯ ಸತೀಶ್ ಧವನ್ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ 61ನೇ ವನ್ಯಜೀವಿ ಸಪ್ತಾಹದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡುತ್ತಾ, ಶಾಲಾ ಕಾಲೇಜುಗಳಲ್ಲಿ ಅಕ್ಷರ ಜ್ಞಾನದ ಜೊತೆಗೆ ಪರಿಸರ ಸಮತೋಲನ ಕಾಪಾಡುವ, ಅರಣ್ಯ, ವನ್ಯಜೀವಿಗಳನ್ನು ಪ್ರೀತಿಸುವಂತಹ ಸಂಸ್ಕಾರವನ್ನು ಸಹ ಒದಗಿಸಬೇಕಾಗುತ್ತದೆ ಎಂದರು.

ವನ್ಯಜೀವಿಗಳನ್ನು ಕೊಲ್ಲುವ ಮತ್ತು ಅರಣ್ಯ ಸಂಪತ್ತನ್ನು ನಾಶಪಡಿಸುವ ಅಧಿಕಾರ ಯಾರಿಗೂ ಇಲ್ಲ. ಬದಲಿಗೆ ಅರಣ್ಯ ಮತ್ತು ವನ್ಯಜೀವಿಗಳ ಬಗ್ಗೆ ಅಪಾರ ಪ್ರೀತಿಯನ್ನು ನಾವುಗಳು ಬೆಳೆಸಿಕೊಳ್ಳಬೇಕಾಗುತ್ತದೆ ಎಂದ ಅವರು, ಯಾವ ವ್ಯಕ್ತಿ ಪರಿಸರ, ವನ್ಯಜೀವಿಗಳ ಬಗ್ಗೆ ಪ್ರೀತಿ ಹೊಂದಿರುತ್ತಾನೆಯೋ ಅವನು ಇಡೀ ಜಗತ್ತಿನಲ್ಲಿಯೇ ಶ್ರೇಷ್ಠ ವ್ಯಕ್ತಿ ಎನಿಸಿಕೊಳ್ಳುತ್ತಾನೆ ಎಂದರು.

. ಯಾವ ರಾಜ್ಯದಲ್ಲಿ ವೃಕ್ಷ ಸಂಪತ್ತು ಹೆಚ್ಚಿರುತ್ತದೆಯೋ ಆ ರಾಜ್ಯದಲ್ಲಿ ಹೆಚ್ಚು ಮಳೆ ಸುರಿದು ಸಕಲ ಜೀವಸಂಕುಲ ಸಮೃದ್ದಿಯಾಗಿರುತ್ತದೆ ಎಂದ ಅವರು, ರಾಜ್ಯದಲ್ಲಿ ತಲೆ ಎತ್ತಿರುವ ಅನೇಕ ಸಂಸ್ಥೆಗಳು ಮತ್ತು ಕಂಪನಿಗಳು ಅರಣ್ಯೀಕರಣಕ್ಕೆ ಹೆಚ್ಚು ಒತ್ತು ನೀಡುವ ನಿಟ್ಟಿನಲ್ಲಿ ಸರ್ಕಾರ ಪ್ರೋತ್ಸಾಹದಾಯಕ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದು ಸೂಚಿಸಿದರು.

ಅರಣ್ಯ ಸಚಿವ ಬಿ.ರಮಾನಾಥ್ ರೈ ಅವರು ಮಾತನಾಡಿ, ಭೂಮಿಯ ಮೇಲೆ ಎಲ್ಲರಿಗೂ ಜೀವಿಸುವ ಹಕ್ಕಿದೆ. ಹಾಗೆಯೇ ವನ್ಯಜೀವಿಗಳಿಗೂ ಜೀವಿಸುವ ಹಕ್ಕಿದೆ. ವನ್ಯ ಜೀವಿ ಸಂರಕ್ಷಣಾ ಕಾಯ್ದೆ ಜಾರಿಗೆ ಬರುವ ಮುನ್ನ ಅಪಾರ ಪ್ರಮಾಣದಲ್ಲಿ ವನ್ಯಜೀವಿಗಳನ್ನು ಬೇಟೆಯಾಡಲಾಗುತ್ತಿತ್ತು. ಆದರೆ ಕಾಯ್ದೆ ಜಾರಿಗೆ ಬಂದ ನಂತರ ಬೇಟೆಯಾಡುವುದು ನಿಯಂತ್ರಣಕ್ಕೆ ಬಂದಿದೆ ಎಂದರು.

ಪ್ರತಿಯೊಬ್ಬರಿಗೂ ಪರಿಸರ ಮಹತ್ವದ ಬಗ್ಗೆ ಅರಿವು ಮೂಡಿಸಲು ಹಾಗೂ ವನ್ಯಜೀವಿಗಳ ಬಗ್ಗೆ ಒಲವು ಮೂಡಿಸಲು ವನ್ಯಜೀವಿ ಸಪ್ತಾಹ ಆಚರಿಸಲಾಗುತ್ತಿದೆ ಎಂದ ಅವರು, ಪರಿಸರ ಸಮತೋಲನಕ್ಕೆ ವನ್ಯ ಜೀವಿ, ವನ್ಯ ಸಂಪತ್ತಿನ ಉತ್ತಮ ಸ್ಥಿತಿಗತಿ ಅವಶ್ಯಕ. ಅವುಗಳನ್ನು ಸಂರಕ್ಷಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಎಂದರು.

ನಗರೀಕರಣದ ಭರದಲ್ಲಿ ಭೂ ಅತಿಕ್ರಮಣ ಮತ್ತು ಪರಿಸರದ ಮೇಲೆ ಮಾನವನ ದಾಳಿಯಿಂದಾಗಿ ಅರಣ್ಯ ವಿಸ್ತೀರ್ಣ ಕಡಿಮೆಯಾಗುತ್ತದೆ. ನೀರಿನ ಮೂಲಗಳು ಬತ್ತಿ ಹೋಗುವುದರ ಜೊತೆಗೆ ಇರುವ ನೀರು ವಿಷಕಾರಿಯಾಗುತ್ತದೆ. ಇದರಿಂದ ವನ್ಯಜೀವಿಗಳ ಬೆಳವಣಿಗೆ ಮತ್ತು ಉಳಿವಿಗೆ ಧಕ್ಕೆಯಾಗುತ್ತಿದೆ. ಇದರ ಪರಿಣಾಮ ವನ್ಯಜೀವಿಗಳು ಆಹಾರ ಹುಡುಕಿಕೊಂಡು ಕಾಡು ಬಿಟ್ಟು ನಾಡಿಗೆ ಬರುತ್ತಿದ್ದು, ಇದರಿಂದ ವನ್ಯಜೀವಿ ಮಾನವ ಸಂಘರ್ಷ ಎದುರಾಗುತ್ತಿದೆ ಎಂದರು.

ಇದೇ ಸಂದರ್ಭ ಮುಂದಿನ ಪೀಳಿಗೆಗಾಗಿ ಪರಿಸರ ಸಂರಕ್ಷಣೆ ಕುರಿತು ಏರ್ಪಡಿಸಲಾಗಿದ್ದ ಚಿತ್ರ ಬಿಡುಸುವಿಕೆ ಮತ್ತು ಪ್ರಬಂಧ ಸ್ಪರ್ಧೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ರಾಜ್ಯಪಾಲರು ಬಹುಮಾನ ವಿತರಿಸಿದರು. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಡಾ. ರವಿ ರಾಲ್ಫ್ ಸ್ವಾಗತಿಸಿದರು. ಶಾಸಕ

ಡಾ.ಸಿ.ಎನ್.ಅಶ್ವಥ್ ನಾರಾಯಣ, ಪಾಲಿಕೆ ಸದಸ್ಯೆ ಶ್ರೀಮತಿ ಸುಮಂಗಲ ಬಿ., ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಆರ್. ಉದಯ್ ಕುಮಾರ್ ಉಪಸ್ಥಿತರಿದ್ದರು.

**ಪಲ್ಲವಿ/ಮಮತಾ**

## ಹೊಸ ಕೈಗಾರಿಕಾ ನೀತಿಯಿಂದ ಮಹಿಳಾ ಉದ್ದಿಮೆದಾರರಿಗೆ ಹಲವು ಕಾರ್ಯಕ್ರಮಗಳು- ಶ್ರೀಮತಿ ಉಮಾಶ್ರೀ

**ಬೆಂಗಳೂರು, ಅಕ್ಟೋಬರ್ 7 (ಕರ್ನಾಟಕ ವಾರ್ತೆ)**

ರಾಜ್ಯ ಸರ್ಕಾರ ಹೊಸ ಕೈಗಾರಿಕಾ ನೀತಿಯನ್ನು ಜಾರಿಗೆ ತಂದಿದ್ದು ಇದರಿಂದಾಗಿ ಮಹಿಳಾ ಉದ್ದಿಮೆದಾರರಿಗೆ ಹಲವು ರಿಯಾಯಿತಿಗಳನ್ನು ನೀಡಿದೆ. ಇದರ ಸದುಪಯೋಗ ಪಡೆದುಕೊಳ್ಳಲು ಮಹಿಳಾ ಉದ್ಯಮಿಗಳು ಮುಂದಾಗಬೇಕು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರೂ ಆದ ಶ್ರೀಮತಿ ಉಮಾಶ್ರೀ ಅವರು ತಿಳಿಸಿದರು.

ಇಂದು ವಿಕಾಸ ಸೌಧದಲ್ಲಿ ಏರ್ಪಡಿಸಿದ್ದ ಮಹಿಳಾ ಉದ್ಯಮಿಗಳ ಸಹಾಯಕ್ಕಾಗಿ ಸಂವಾದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಶ್ರೀಮತಿ ಉಮಾಶ್ರೀ ಅವರು ತಾಂತ್ರಿಕತೆ ಇಲ್ಲದೆ ಮನುಷ್ಯನ ಬದುಕು ಸಾಧ್ಯವಿಲ್ಲ ಎನ್ನುವ ಪರಿಸ್ಥಿತಿ ಇದೆ. ಮಹಿಳೆಯರು ತಾವು ಪ್ರಾರಂಭಿಸುವ ಉದ್ದಿಮೆಗಳ ಬಗ್ಗೆ ತರಬೇತಿ ಹೊಂದಿ ಉದ್ದಿಮೆಗಳನ್ನು ಪ್ರಾರಂಭಿಸಿದ್ದಲ್ಲಿ ಹೆಚ್ಚು ಯಶಸ್ಸು ಸಾಧಿಸಬಹುದು ಎಂದರು.

ಮಹಿಳಾ ಉದ್ಯಮಿಗಳು ಉದ್ದಿಮೆಗಳನ್ನು ಸ್ಥಾಪಿಸಲು ಮುಂದಾದಲ್ಲಿ ಭೂಮಿಯನ್ನು ನೀಡಬೇಕಾಗುತ್ತದೆ ಎಂದ ಸಚಿವರು ಸರ್ಕಾರೇತರ ಸಂಸ್ಥೆಗಳು ಮಹಿಳೆಯರು ಪ್ರಾರಂಭಿಸುವ ಉದ್ದಿಮೆಗಳ ಬೆಳವಣಿಗೆಗೆ ಉತ್ತೇಜನ ನೀಡಬೇಕು ಎಂದ ಅವರು, ಮಹಿಳಾ ಉದ್ಯಮಿಗಳು ಹೊಸದಾಗಿ ಉದ್ದಿಮೆಗಳನ್ನು ಪ್ರಾರಂಭಿಸಲು ಮುಂದೆ ಬಂದಲ್ಲಿ ಸರ್ಕಾರ ಸಹಕಾರ ನೀಡಲಿದೆ ಎಂದು ಸಣ್ಣ ಕೈಗಾರಿಕಾ ಸಚಿವರಾದ ಶ್ರೀ ಸತೀಶ್ ಜಾರಕಿಹೊಳಿ ಅವರು ತಿಳಿಸಿದರು.

ದೇವರಾಜ ಅರಸು ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀ ರಾಮಚಂದ್ರಪ್ಪ, ಕರ್ನಾಟಕ ವೃತ್ತಿ ತರಬೇತಿ ಮತ್ತು ಕೌಶಲ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀಮತಿ ಪುಷ್ಪ ಲಕ್ಷ್ಮಣಸ್ವಾಮಿ ಹಾಗೂ ವಿವಿಧ ಅಭಿವೃದ್ಧಿ ನಿಗಮಗಳ ಅಧ್ಯಕ್ಷರು ವಿವಿದ ಮಹಿಳಾ ಉದ್ಯಮಿಗಳು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮುಖ್ಯ ಕಾರ್ಯದರ್ಶಿಗಳಾದ ಶ್ರೀ ರಜನೀಶ್ ಗೋಯಲ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ: ಶಾಲಿನಿ ರಜನೀಶ್ ಹಾಗೂ ರಾಜ್ಯದ್ಯಂತ ಹಲವು ಸಿದ್ದ ಸ್ವಸಹಾರ ಗುಂಪುಗಳ ಸದಸ್ಯರು, ಅಧಿಕಾರಿಗಳು ಹಾಜರಿದ್ದರು.

ಪಲ್ಲವಿ/ಕೆಪಿಪಿ/ಕೆಎಂ

## ಅಂಬ್ಯುಲೆನ್ಸ್ ವಾಹನಗಳನ್ನು ಹಿಂದಿಕ್ಕಿ ಹೋಗುವ ವಾಹನ ಚಾಲಕರ ಪರವಾನಗಿ ರದ್ದಿಗೆ ಚಿಂತನೆ: ಸಿದ್ದರಾಮಯ್ಯ

**ಬೆಂಗಳೂರು, ಅಕ್ಟೋಬರ್ 7 (ಕರ್ನಾಟಕ ವಾರ್ತೆ)**

ಬೆಂಗಳೂರು ನಗರದಲ್ಲಿ ಸಂಚಾರಿ ದಟ್ಟಣೆ ಹೆಚ್ಚಾಗಿದ್ದು ಅಂಬ್ಯುಲೆನ್ಸ್‌ಗಳು ಬಂದಾಗ ಇತರೆ ವಾಹನ ಚಾಲಕರು ದಾರಿ ಮಾಡಿಕೊಡಬೇಕು ಇಲ್ಲದಿದ್ದಲ್ಲಿ ಅಂಬುಲೆನ್ಸ್‌ಗಳನ್ನು ಹಿಂದಿಕ್ಕಿ ಹೋಗುವ ವಾಹನ ಚಾಲಕರ ಪರವಾನಗಿಯನ್ನು ರದ್ದುಪಡಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎಚ್ಚರಿಸಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇಂದು ವಿಧಾನ ಸೌಧದ ಮುಂಭಾಗದಲ್ಲಿ ಏರ್ಪಡಿಸಿದ್ದ ಆರೋಗ್ಯ ಕವಚ 108 ಯೋಜನೆಯಡಿ ನೂತನ ಆಂಬುಲೆನ್ಸ್ ವಾಹನಗಳನ್ನು ಲೋಕಾರ್ಪಣೆ ಮಾಡಿ ಮಾತನಾಡಿದ ಮುಖ್ಯಮಂತ್ರಿ ಅವರು ಅನಾರೋಗ್ಯ ಪೀಡಿತರು ಕಡಿಮೆ ಅವಧಿಯೊಳಗೆ ಆಸ್ಪತ್ರೆಗೆ ತಲುಪಿದ್ದಲ್ಲಿ ಅವರಿಗೆ ಉತ್ತಮ ಚಿಕಿತ್ಸೆ ದೊರೆಕಿ ಅವರ ಪ್ರಾಣಹಾನಿ ತಪ್ಪುತ್ತದೆ ಎಂದರು.

ಎಲ್ಲರಿಗೂ ಆರೋಗ್ಯ ಸಿಗಬೇಕು ಹಾಗೆಯೇ ಎಲ್ಲೆಡೆ ಆರೋಗ್ಯ ಇರಬೇಕು ಎಂಬುದು ಸರ್ಕಾರದ ಉದ್ದೇಶ ಎಂದ ಮುಖ್ಯಮಂತ್ರಿ ಅವರು ರಾಜ್ಯದಲ್ಲಿ ಈಗಾಗಲೇ 711 ಅಂಬುಲೆನ್ಸ್‌ಗಳು ಸೇವೆಯಲ್ಲಿವೆ ಈಗ 150 ಹೊಸ ಆಂಬುಲೆನ್ಸ್‌ಗಳನ್ನು ಲೋಕಾರ್ಪಣೆ ಮಾಡಲಾಗುತ್ತಿದೆ ಎಂದರು.

ಆಶಾ ಕಾರ್ಯಕರ್ತರ ಗೌರವಧನವನ್ನು ಇನ್ನು ಮುಂದೆ ಅವರ ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡಲಾಗುವುದು ಎಂದು ಮಾತನಾಡಿದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ಯು.ಟಿ. ಖಾದರ್ ಅವರು ಸುಮಾರು 3 ರಿಂದ 3.5 ಲಕ್ಷ ಕಿ.ಮಿ ಓಡಿದ ಅಂಬುಲೆನ್ಸ್‌ಗಳನ್ನು ಬದಲಾವಣೆ ಮಾಡಲಾಗುತ್ತಿದ್ದು, ಆರೋಗ್ಯ ಕವಚ ಯೋಜನೆಗೆ ಹೊಸ ಅಂಬುಲೆನ್ಸ್ ವಾಹನಗಳನ್ನು ಸೇರ್ಪಡೆಗೊಳಿಸಲಾಗುತ್ತಿದೆ ಎಂದರು.

ವೈದ್ಯಕೀಯ ಶಿಕ್ಷಣ ಸಚಿವ ಡಾ: ಶರಣಪ್ರಕಾಶ ಪಾಟೀಲ್, ಸಾರಿಗೆ ಸಚಿವರಾದ ರಾಮಲಿಂಗಾರೆಡ್ಡಿ, ಆರೋಗ್ಯ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.
ಪಲ್ಲವಿ/ಕೆಪಿಪಿ/ಕೆಎಂ

## ಬಂಜಾರ ಸಮಾಜದ ಕಲೆ, ಸಂಸ್ಕೃತಿಯನ್ನು ಉಳಿಸಲು ಕ್ರಮ: ಸಚಿವ ಪರಮೇಶ್ವರನಾಯಕ್

**ಬೆಂಗಳೂರು, ಅಕ್ಟೋಬರ್ 7 (ಕರ್ನಾಟಕ ವಾರ್ತೆ)**

ಬಂಜಾರ ಸಮಾಜದ ವೇಶಭೂಷಣಗಳು ಹಾಗೂ ಕಲೆ, ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ಉಳಿಸಬೇಕಾಗಿದೆ ಎಂದು ಕಾರ್ಮಿಕ ಸಚಿವ ಶ್ರೀ ಪರಮೇಶ ನಾಯಕ್ ಅವರು ತಿಳಿಸಿದರು.

ವಿಕಾಸ ಸೌಧದಲ್ಲಿ ಇಂದು ಏರ್ಪಡಿಸಲಾಗಿದ್ದ ಸಂಡೂರು ಕರಕುಶಲ ಕೇಂದ್ರದ ಜೊತೆ ಸರ್ಕಾರದ ಒಂಡಂಬಡಿಕೆಗೆ ಸಹಿ ಹಾಕುವ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು ಮಾತನಾಡಿದ ಸಚಿವರು ಬಂಜಾರ ಸಮಾಜ ಅಭಿವೃದ್ಧಿಗಾಗಿ ಮುಖ್ಯಮಂತ್ರಿ ಅವರು ಬಜೆಟ್‌ನಲ್ಲಿ ಸುಮಾರು 12 ಕೋಟಿ ರೂ.ಗಳನ್ನು

ಮೀಸಲಿಟ್ಟಿದ್ದು ಈ ಸಮುದಾಯದ ಸರ್ವತೋಮುಖ ಅಭಿವೃದ್ಧಿಗೆ ಹಣವನ್ನು ವಿನಿಯೋಗಿಸಲಾಗುವುದು ಎಂದರು.

ಸಂಡೂರು ಕರಕುಶಲ ಕಲಾ ಕೇಂದ್ರದ ಕಾರ್ಯದರ್ಶಿ ರಮೇಶ್ ವರ್ಮ ಹಾಗೂ ಉದ್ಯೋಗ ಮತ್ತು ತರಬೇತಿ ಇಲಾಖೆಯ ಆಯುಕ್ತರಾದ ಮಂಜುನಾಥ್ ಬಾಬು ಅವರು ಒಡಂಬಡಿಕೆಗೆ ಸಹಿ ಹಾಕಿದರು.

ಸರ್ಕಾರದ ಅಪರ ಕಾರ್ಯದರ್ಶಿಗಳಾದ ರಾಮಮೂರ್ತಿ, ಕರ್ನಾಟಕ ವೃತ್ತಿ ತರಬೇತಿ ಮತ್ತು ಕೌಶಲ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪುಷ್ಪ ಲಕ್ಷ್ಮಣಸ್ವಾಮಿ ಅವರು ಉಪಸ್ಥಿತರಿದ್ದರು.

ಪಲ್ಲವಿ/ಕೆಪಿಪಿ/ಕೆಎಂ

# ಮಹರ್ಷಿ ವಾಲ್ಮೀಕಿ ಪ್ರಶಸ್ತಿ ಆಯ್ಕೆ ಸಮಿತಿ ರಚನೆ

**ಬೆಂಗಳೂರು, ಅಕ್ಟೋಬರ್ 7 (ಕರ್ನಾಟಕ ವಾರ್ತೆ)**

**ಶ್ರೀ ಮಹರ್ಷಿ ವಾಲ್ಮೀಕಿ ಸ್ಮರಣಾರ್ಥ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ಆಯ್ಕೆಗಾಗಿ ರಾಜ್ಯ ಸರ್ಕಾರವು ಸಮಿತಿ ರಚಿಸಿದ್ದು, ಪ್ರೊ ಬರಗೂರು ರಾಮಚಂದ್ರಪ್ಪ ಅವರು ಸಮಿತಿಯ ಅಧ್ಯಕ್ಷರಾಗಿದ್ದಾರೆ. ಈ ಸಮಿತಿಯಲ್ಲಿ ಹಿರಿಯ ಪತ್ರಕರ್ತ ಡಾ. ಸರಜೂಕಾಟ್ಕರ್, ಡಾ ಪ್ರಶಾಂತ್ ನಾಯಕ್, ಡಾ. ಲೋಲಾಕ್ಷಿ ಎನ್.ಕೆ., ಪ್ರೊ. ಸಿ. ಕೆ. ಮಹೇಶ್, ಪರಿಶಿಷ್ಟ ವರ್ಗಗಳ ಇಲಾಖೆ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರು ಸದಸ್ಯರಾಗಿರುತ್ತಾರೆ. ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯದ ಉಪ ನಿರ್ದೇಶಕರು (ಆಡಳಿತ) ಸಮಿತಿಯ ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ.**

**ಪ್ರಶಸ್ತಿಯು ಪ್ರಶಂಸನಾ ಪತ್ರ, ಶಾಲು, ಗಂಧದ ಹಾರ, ಫಲಪುಷ್ಪ ಹಾಗೂ ಎರಡು ಲಕ್ಷ ರೂ. ಗಳ ನಗದು ಪುರಸ್ಕಾರ ಹೊಂದಿರುತ್ತದೆ.**

**ಮಹರ್ಷಿ ವಾಲ್ಮೀಕಿ ಜಯಂತಿ ದಿನವಾದ ಅಕ್ಟೋಬರ್ 27 ರಂದು ಪ್ರಶಸ್ತಿ ಪ್ರದಾನ ಮಾಡಲಾಗುವುದು.**

ಪಲ್ಲವಿ:ಬಾಬು:ಜಿಪಿಆರ್.

# ದಸರಾ ರಜೆ

**ಬೆಂಗಳೂರು, ಅಕ್ಟೋಬರ್ 7 (ಕರ್ನಾಟಕ ವಾರ್ತೆ)**

ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣಕ್ಕೆ ಅಕ್ಟೋಬರ್ 19 ರಿಂದ 21 ರವರೆಗೆ ನ್ಯಾಯಪೀಠ – 1 ರಿಂದ ನ್ಯಾಯಪೀಠ – 8 ರವರೆಗೆ ದಸರಾ ರಜೆ ಘೋಷಿಸಲಾಗಿದೆ. ಆದುದರಿಂದ ಈ ದಿನಾಂಕಗಳಂದು ಕೆಲವು ನ್ಯಾಯಪೀಠಗಳನ್ನು ಏಕ ಸದಸ್ಯ ಪೀಠವಾಗಿ ಮತ್ತು ಕೆಲವು ನ್ಯಾಯಪೀಠಗಳನ್ನು ಪೀಠ ರಹಿತವಾಗಿ ರಚಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಪಲ್ಲವಿ:ಬಾಬು:ಜಿಪಿಆರ್.

## ರಾಜ್ಯದಲ್ಲಿ ಪಡಿತರ ವಿತರಣೆ

**ಬೆಂಗಳೂರು, ಅಕ್ಟೋಬರ್ 7 (ಕರ್ನಾಟಕ ವಾರ್ತೆ)**

ರಾಜ್ಯದಲ್ಲಿ ಸಾರ್ವಜನಿಕ ವಿತರಣಾ ಪದ್ದತಿಯಡಿ ನ್ಯಾಯಬೆಲೆ ಅಂಗಡಿಗಳ ಮೂಲಕ ಪಡಿತರ ಚೀಟಿದಾರರಿಗೆ ವಿತರಿಸುವ ಸಲುವಾಗಿ 2015 ರ ಅಕ್ಟೋಬರ್ ಮಾಹೆಗೆ ಆಹಾರಧಾನ್ಯಗಳನ್ನು ಈ ಕೆಳಕಂಡ ಪ್ರಮಾಣ ಹಾಗೂ ದರದಲ್ಲಿ ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗಿದೆ.

ಎಎವೈ ಮತ್ತು ಬಿಪಿಎಲ್ ಪಡಿತರ ಚೀಟಿಗಳಿಗೆ ಉಚಿತವಾಗಿ ಆಹಾರಧಾನ್ಯ ವಿತರಣೆಯಾಗುತ್ತಿದ್ದು, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ್, ವಿಜಯಪುರ, ಧಾರವಚಾಡ, ಗದಗ, ಕಲ್ಬುರ್ಗಿ, ಹಾವೇರಿ, ಕೊಪ್ಪಳ, ರಾಯಚೂರು, ಉತ್ತರ ಕನ್ನಡ, ಯಾದಗಿರಿ, ದಾವಣಗೆರೆ, ಉಡುಪಿ, ಶಿವಮೊಗ್ಗ, ದಕ್ಷಿಣ ಕನ್ನಡ, ಕೊಡಗು ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಎಎವೈ ಪಡಿತರ ಚೀಟಿಗಳಿಗೆ ಸಂಪೂರ್ಣವಾಗಿ 35 ಕೆಜಿ ಅಕ್ಕಿ ವಿತರಣಾ ಪ್ರಮಾಣ ನಿಗದಿಪಡಿಸಲಾಗಿದೆ. ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಾಮರಾಜನಗರ, ಚಿಕ್ಕಮಗಳೂರು, ಚಿತ್ರದುರ್ಗ, ಹಾಸನ, ಕೋಲಾರ, ಮಂಡ್ಯ, ಮೈಸೂರು, ತುಮಕೂರು, ರಾಮನಗರ ಹಾಗೂ ಬೆಂಗಳೂರು ಆಹಾರ ಪಡಿತರ ಪ್ರದೇಶದ ಎಎವೈ ಪಡಿತರ ಚೀಟಿಗಳಿಗೆ 29 ಕೆಜಿ ಅಕ್ಕಿ ಹಾಗೂ 6 ಕೆಜಿ ಗೋಧಿ ವಿತರಣಾ ಪ್ರಮಾಣ ನಿಗದಿಪಡಿಸಲಾಗಿದೆ.

ಗದಗ, ರಾಯಚೂರು, ಉತ್ತರ ಕನ್ನಡ, ಯಾದಗಿರಿ, ಚಿತ್ರದುರ್ಗ, ದಕ್ಷಿಣ ಕನ್ನಡ, ಕೊಡಗು, ಶಿವಮೊಗ್ಗ, ಉಡುಪಿ, ಚಿಕ್ಕಬಳ್ಳಾಪುರ ಜಿಲ್ಲೆಯ ಬಿಪಿಎಲ್ ಪಡಿತರ ಚೀಟಿಗಳಿಗೆ ಸಂಪೂರ್ಣವಾಗಿ 5 ಕೆಜಿ ಅಕ್ಕಿ ವಿತರಣಾ ಪ್ರಮಾಣ ನಿಗದಿಪಡಿಸಲಾಗಿದೆ.

ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ್, ವಿಜಯಪುರ, ಧಾರವಾಡ, ಕಲ್ಬುರ್ಗಿ, ಹಾವೇರಿ, ಕೊಪ್ಪಳ ಹಾಗೂ ದಾವಣಗೆರೆ ಜಿಲ್ಲೆಗಳ ಬಿಪಿಎಲ್ ಪಡಿತರ ಚೀಟಿಗಳಿಗೆ 3 ಕೆಜಿ ಅಕ್ಕಿ ಹಾಗೂ 2 ಕೆಜಿ ಗೋಧಿ ವಿತರಣಾ ಪ್ರಮಾಣ ನಿಗದಿಪಡಿಸಲಾಗಿದೆ.

ಬೆಂಗಳೂರು ನಗರ, ಗ್ರಾಮಾಂತರ, ಚಾಮರಾಜನಗರ, ಚಿಕ್ಕಮಗಳೂರು,ಚ ಹಾಸನ, ಕೋಲಾರ, ಮಂಡ್ಯ, ಮೈಸೂರು, ತುಮಕೂರು, ರಾಮನಗರ ಹಾಗೂ ಬೆಂಗಳೂರು ಆಹಾರ ಪಡಿತರ ಪ್ರದೇಶದ ಬಿಪಿಎಲ್ ಪಡಿತರ ಚೀಟಿಗಳಿಗೆ 3 ಕೆಜಿ ಅಕ್ಕಿ ಹಾಗೂ 2 ಕೆಜಿ ರಾಗಿ ವಿತರಣಾ ಪ್ರಮಾಣ ನಿಗದಿಪಡಿಸಲಾಗಿದೆ.

ಎಎವೈ ಮತ್ತು  ಬಿಪಿಎಲ್‌ನ ಪ್ರತಿ ಪಡಿತರ ಚೀಟಿಗೆ ತಾಳೆ ಎಣ್ಣೆ 1 ಲೀ ರೂ 25/– ರಂತೆ, ಅಯೋಡಿನ್‌ಯುಕ್ತ ಉಪ್ಪು ಒಂದು ಕೆ.ಜಿ ರೂ 2/– ರಂತೆ ಹಾಗೂ ಸಕ್ಕರೆ 2 ಕೆಜಿ ರೂ 13–50 ರಂತೆ ಹಂಚಿಕೆ ನೀಡಲಾಗಿದೆ.

ನೋಂದಣೆಯಾದ ಎಪಿಎಲ್ ಪಡಿತರ ಚೀಟಿಯ ಏಕ ಸದಸ್ಯ ಕುಟುಂಬ ಕ್ಕೆ 5 ಕೆ.ಜಿ. ಆಹಾರ ಧಾನ್ಯವನ್ನು (3ಕೆಜಿ ಅಕ್ಕಿ ಮತ್ತು 2 ಕೆಜಿ ಗೋಧಿ) ಹಾಗೂ ಒಂದಕ್ಕಿಂತ ಹೆಚ್ಚು ಸದಸ್ಯರಿರುವ ಕುಟುಂಬಕ್ಕೆ 10 ಕೆಜಿ ಆಹಾರ ಧಾನ್ಯವನ್ನು (5ಕೆಜಿ ಅಕ್ಕಿ, 5 ಕೆಜಿ ಗೋಧಿ) ಪ್ರತಿ ಕೆಜಿ ಅಕ್ಕಿಗೆ ರೂ 15/– ಹಾಗೂ ಪ್ರತಿ ಕೆಜಿ ಗೋಧಿಗೆ ರೂ 10/– ರ ದರದಲ್ಲಿ ಹಂಚಿಕೆ ನೀಡಲಾಗಿದೆ.

ಎಎವೈ ಮತ್ತು  ಬಿಪಿಎಲ್‌ನ ಏಕಸದಸ್ಯ ಮತ್ತು ದ್ವಿ ಸದಸ್ಯ ಅನಿಲ ರಹಿತ ಪಡಿತರ ಚೀಟಿಗಳಿಗೆ 3 ಲೀಟರ್‌ನಂತೆ, ಮೂರು ಮತ್ತು ಹೆಚ್ಚಿನ ಸದಸ್ಯರಿರುವ ಪಡಿತರ ಚೀಟಿಗಳಿಗೆ 5 ಲೀಟರ್‌ನಂತೆ ಹಾಗೂ ಗ್ರಾಮಾಂತರ ಪ್ರದೇಶದ ಎಪಿಎಲ್ ಅನಿಲ ರಹಿತ ಪಡಿತರ ಚೀಟಿಗಳಿಗೆ 2 ಲೀಟರ್‌ನಂತೆ ವಿತರಣಾ ಪ್ರಮಾಣವನ್ನು ನಿಗದಿಪಡಿಸಿ ಹಂಚಿಕೆ ನೀಡಲಾಗಿದೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ ಪ್ರಕಟಣೆ ತಿಳಿಸಿದೆ.

ಪಲ್ಲವಿ:ಬಾಬು:ಜಿಪಿಆರ್.

## ಈ ವಾರದ ಬೆಳ್ಳಿಸಿನಿಮಾ–ಬೆಳ್ಳಿಮಾತು: “ಇಂಗಳೆ ಮಾರ್ಗ” ಚಲನಚಿತ್ರ ಪ್ರದರ್ಶನ, ಸಂವಾದ

ಬೆಂಗಳೂರು, ಅಕ್ಟೋಬರ್ 7 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ ನಡೆಸುವ ಬೆಳ್ಳಿಸಿನಿಮಾ–ಬೆಳ್ಳಿಮಾತು ಕಾರ್ಯಕ್ರಮದಡಿ ಅಕ್ಟೋಬರ್ 10 ರ ಶನಿವಾರದಂದು ಬೆಳ್ಳಿ ಸಿನಿಮಾ “ ಇಂಗಳೆ ಮಾರ್ಗ ” ಚಲನಚಿತ್ರ ಪ್ರದರ್ಶನವನ್ನು ಏರ್ಪಡಿಸಲಾಗಿದೆ. ಈ ಚಿತ್ರದ ನಿರ್ದೇಶಕ ವಿಶಾಲ್ ರಾಜ್ ಅವರಿಂದ ಬೆಳ್ಳಿಮಾತು ಸಂವಾದ ಕಾರ್ಯಕ್ರಮ  ನಡೆಯಲಿದೆ ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು  ತಿಳಿಸಿದ್ದಾರೆ.

ಬೆಂಗಳೂರು ಮಿಲ್ಲರ್ಸ್ ರಸ್ತೆಯ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ  ಅಕ್ಟೋಬರ್ 10 ರಂದು ಸಂಜೆ 4–00 ಗಂಟೆಗೆ ನಡೆಯುವ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್. ವಿ. ರಾಜೇಂದ್ರ ಸಿಂಗ್ ಬಾಬು ಅವರು ವಹಿಸುವರು. ಬೆಂಗಳೂರು ಪ್ರೆಸ್ ಕ್ಲಬ್‌ನ ಕಾರ್ಯದರ್ಶಿ ಎಸ್. ಶಿವಪ್ರಕಾಶ್, ಚಲನಚಿತ್ರ ನಿರ್ಮಾಪಕ ಘನಶ್ಯಾಮ ಭಾಂಡಗೆ ಹಾಗೂ ಚಲನಚಿತ್ರ ನಟ ಸುಚೇಂದ್ರ ಪ್ರಸಾದ್ ಪಾಲ್ಗೊಳ್ಳುವರು ಎಂದು ಹೆಚ್. ಬಿ. ದಿನೇಶ್  ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್‌ಬಿಡಿ:ಬಾಬು:ಜಿಪಿಆರ್.

## ದೋಷಪೂರಿತ ಮೀಟರ್: 100 ಆಟೋಗಳ ವಿರುದ್ಧ ಕ್ರಮ

**ಬೆಂಗಳೂರು, ಅಕ್ಟೋಬರ್ 7 (ಕರ್ನಾಟಕ ವಾರ್ತೆ)**

ಕಾನೂನು ಮಾಪನಶಾಸ್ತ್ರ ಇಲಾಖೆಯ ಆಟೋ ಮತ್ತು ಟ್ಯಾಕ್ಸಿ ಘಟಕವರು ಇಂದು ನಗರದ ಕೆಂಪೇಗೌಡ ಬಸ್ ನಿಲ್ದಾಣ ಹಾಗೂ ಯಶವಂತಪುರದಲ್ಲಿ ತಪಾಸಣಾ ಕಾರ್ಯವನ್ನು ಕೈಗೊಂಡು 565 ಆಟೋ ಮೀಟರ್ ತಪಾಸಣೆಯನ್ನು ನಡೆಸಿ 100 ಆಟೋ ಮಾಲೀಕರ/ಚಾಲಕರ ವಿರುದ್ಧ ದೋಷಪೂರಿತ ದರ ಮೀಟರ್‌ಗಳ ಮೊಕದ್ದಮೆಗಳನ್ನು ದಾಖಲಿಸಲಾಗಿದೆ.

ಆಟೋ ಮಾಲೀಕರು. ದೋಷಪೂರಿತ ಆಟೋ ದರ ಮೀಟರ್‌ಗಳನ್ನು ದುರುಪಯೋಗಪಡಿಸಿಕೊಂಡು ವಂಚನೆ ಮಾಡುತ್ತಿರುವ ಪ್ರಕರಣ ಕಂಡುಬಂದಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಹಾಗೂ ಈ ತಪಾಸಣೆಯನ್ನು ಬೆಂಗಳೂರಿನಾದ್ಯಂತ ನಡೆಸಲಾಗುವುದು. ಸಾರ್ವಜನಿಕರ ಗಮನಕ್ಕೆ ಇಂತಹ ಪ್ರಕರಣ ಕಂಡು ಬಂದಲ್ಲಿ ಕಾನೂನು ಮಾಪನ ಇಲಾಖೆಯ ದೂರವಾಣಿ ಸಂಖ್ಯೆ 080–22260554/ 22207750 ಅಥವಾ ಮಿಂಚಂಚೆ clm_lm_ka@nic.in ಮುಖಾಂತರ ನೀಡಬಹುದಾಗಿದೆ.

ಪಲ್ಲವಿ/ಬಾಬು/ಕೆಎಂ